ಅ) ತ್ವರಿತ ಗತಿ ನ್ಯಾಯಾಲಯಗಳನ್ನು ಸತ್ರ ಪ್ರಕರಣಗಳನ್ನು ಅಂದರೆ ನ್ಯಾಯಾಂಗ ಬಂಧನದಲ್ಲಿರುವ ಹಾಗೂ ಹಳೆಯ ಬಾಕಿ ಪ್ರಕರಣಗಳನ್ನು ವಿಲೇವಾರಿ ಮಾಡಲು ಸ್ಥಾಪಿಸಲಾಗಿದೆ.

ಇ) ಸಾಮಾನ್ಯ ನ್ಯಾಯಾಲಯಗಳಲ್ಲಿನ ಕಾರ್ಯ ಒತ್ತಡವನ್ನು ಕಡಿಮೆ ಮಾಡಲು ತ್ವರಿತಗತಿ ನ್ಯಾಯಾಲಯಗಳ ಉದ್ದೇಶಿಸಲಾಗಿದೆ. ತ್ವರಿತಗತಿ ನ್ಯಾಯಾಲಯಗಳು ನಿವೃತ್ತ ನ್ಯಾಯಾಂಗ ಅಧಿಕಾರಿಗಳನ್ನು ಸಂಚಿತ ವೇತನದ ಮೇಲೆ ಪುನರ್ ನೇಮಕಾತಿ ಮಾಡಿಕೊಂಡು ಹಳೆಯ ಪ್ರಕರಣಗಳನ್ನು ತಕ್ಷಣ ವಿಲೇವಾರಿ ಮಾಡಬಹುದಾಗಿರುತ್ತದೆ.

ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಯ ರಸ್ತೆಗಳ ದುರಸ್ತಿ

2290(2719) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) :— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಹಾದು ಹೋಗಿರುವ ಲೋಕೋಪಯೋಗಿ ಇಲಾಖೆ ರಸ್ತೆಗಳು ಹದಗೆಟ್ಟಿದ್ದು ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ

2. ಬಂದಿದ್ದಲ್ಲಿ, ರಸ್ತೆಗಳನ್ನು ದುರಸ್ತಿಪಡಿಸಲು ಕ್ರಮಕ್ಕೆಗೊಳ್ಳದಿರಲು ಕಾರಣಗಳೇನು

3. ಕಳೆದ ಎರಡು ವರ್ಷಗಳಿಂದ ಲೋಕೋಪಯೋಗಿ ರಸ್ತೆಗಳ ನಿರ್ವಹಣೆಗೆ ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಖರ್ಚು ಮಾಡಿರುವ ಹಣವೆಷ್ಟು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :—

1. ಈ ರಸ್ತೆಗಳ ದುರಸ್ತಿಯ ಅವಶ್ಯಕತೆ ಸರ್ಕಾರದ ಗಮನಕ್ಕೆ ಬಂದಿದೆ.

2. ಹೀಗಿರುವ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲ್ಪದರ ಮೇಲೆ ಬಿದ್ದಿರುವ ಗುಂಡಿಗಳನ್ನು ಮುಚ್ಚಲು ಆಯಾ ಸಾಲಿನ ವರ್ಷಗಳಲ್ಲಿ ನಿರ್ವಹಣಾ ಅನುದಾನವನ್ನು ಒದಗಿಸಿಕೊಂಡು ದುರಸ್ತಿಗೊಳಿಸಿ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ. ರಾಜ್ಯ ಹೆದ್ದಾರಿಗಳ 3 ಸಾಲಿನ ವಾರ್ಷಿಕ ನಿರ್ವಹಣೆಯನ್ನು ಕರ್ನಾಟಕ ರಾಜ್ಯ ಅಭಿವೃದ್ಧಿ ನಿಗಮದಿಂದ ಕೈಗೊಳ್ಳಲಾಗುತ್ತಿದೆ. ಜಿಲ್ಲಾ ಮುಖ್ಯ ರಸ್ತೆಗಳನ್ನು ವಾರ್ಷಿಕ ನಿರ್ವಹಣೆ ಅನುದಾನದಲ್ಲಿ ದುರಸ್ತಿ ಮಾಡಲಾಗುತ್ತಿದೆ.

ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿನ ಲೋಕೋಪಯೋಗಿ ರಸ್ತೆಗಳ ನಿರ್ವಹಣೆಗಾಗಿ ಕೆಳಕಂಡಂತೆ ವೆಚ್ಚ ಮಾಡಲಾಗಿದೆ.

೧೯೯೯-೨೦೦೦	ರೂ. ೪೦.೯೯ ಲಕ್ಷ
೨೦೦೦-೨೦೦೧	ರೂ. ೫೩.೮೦ ಲಕ್ಷ
ಒಟ್ಟು	ರೂ. ೯೪.೬೯ ಲಕ್ಷ